# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಡಿ.ಬಿ.ತಿಪ್ಪೇಸ್ವಾಮಿ, ಸದಸ್ಯರು, ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ಆ(9):ಮಗಾರಾಗ್ರಾಉಬಾಯೋ/ಸಿಆರ್-227 ದಿನಾಂಕ:23.01.2019
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/41/2019-20, ದಿನಾಂಕ:03.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರು ಶ್ರೀ ಡಿ.ಬಿ.ತಿಪ್ಪೇಸ್ವಾಮಿ, ಅಧ್ಯಕ್ಷರು, ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ), 48(4) & 48(5)ರಡಿ ಕ್ರಮ ಜರುಗಿಸುವಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ರವರಿಗೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3)ರ ವಿಚಾರಣಾ ವರದಿಯಲ್ಲಿ, ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ಇವರು ಚಿತ್ರದುರ್ಗ ಜಿಲ್ಲೆ, ಹೊಳಲ್ಕೆರೆ ತಾಲ್ಲೂಕು, ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಡಿ.ಬಿ.ತಿಪ್ಪೇಸ್ವಾಮಿ ಬಿನ್ ಬಸವಂತಪ್ಪರವರ ವಿರುದ್ಧ ಇರುವ ದೂರಿಗೆ ಸಂಬಂಧಿಸಿದಂತೆ ಸದರಿರವರಿಗೆ ನೋಟೀಸ್ ನೀಡಿ ದಿನಾಂಕ.30.08.2019, 20.09.2019 ಹಾಗೂ 26.09.2019ರಂದು ವಿಚಾರಣೆ ಮಾಡಿ ಸದರಿರವರಿಂದ ಲಿಖಿತ ಹೇಳಿಕೆ ಪಡೆಯಲಾಗಿರುತ್ತದೆ.

ಶ್ರೀ ಡಿ.ಬಿ.ತಿಪ್ಪೇಸ್ವಾಮಿರವರು ಎನ್.ಜಿ.ಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾಗುವುದಕ್ಕೆ ಮುಂಚೆ ಗುತ್ತಿಗೆದಾರರಾಗಿದ್ದು ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಚುನಾಯಿತರಾದ ನಂತರ ಗುತ್ತಿಗೆದಾರರ ಪರವಾನಗಿಯನ್ನು ನವೀಕರಣ ಮಾಡಿಸಿರುವುದಿಲ್ಲವಾದ್ದರಿಂದ ತನ್ನಷ್ಟಕ್ಕೆ ತಾನೇ ಪರವನಾಗಿ ರದ್ದಾಗಿರುತ್ತದೆ ಎಂದು ತಿಳಿಸಿ, ಗುತ್ತಿಗೆದಾರರ ಪರವಾನಗಿಯ ಪ್ರತಿಯನ್ನು ಹಾಜರುಪಡಿಸಿರುತ್ತಾರೆ. 3ನೇ ದರ್ಜೆ ಗುತ್ತಿಗೆದಾರರ ಲೈಸೆನ್ಸ್ ಪ್ರತಿ ಸಲ್ಲಿಸಿರುತ್ತಾರೆ. ಸದರಿ ಲೈಸೆನ್ಸ್ ಅವಧಿ ದಿನಾಂಕ.31.09.2013 ರಿಂದ 31.03.2015ರವರೆಗಿನ ಅವಧಿಯದ್ದಾಗಿರುತ್ತದೆ. ಚುನಾವಣೆಗೆ ಸ್ಪರ್ಧಿಸುವ ಸಂದರ್ಭದಲ್ಲಿ ಗುತ್ತಿಗೆದಾರರಾಗಿರುವ ಮಾಹಿತಿಯನ್ನು ಗೋಪ್ಯವಾಗಿದ್ದು ಸ್ಪರ್ಧಿಸುವುದು ಕಾನೂನುಬಾಹಿರವಾಗಿರುತ್ತದೆ. ಅಧ್ಯಕ್ಷರ ಈ ಸಮಜಾಯಿಷಿಯನ್ನು ಒಪ್ಪಲಾಗದು ಆದರೆ ಎನ್.ಜಿ.ಹಳ್ಳಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಬರುವ ಗೌಡಿಹಳ್ಳಿ ಗ್ರಾಮದಲ್ಲಿ 2016-17ನೇ ಸಾಲಿನ ಕೂಲಿಕಾರರ ಪಟ್ಟಿಯಲ್ಲಿ ಈಗಾಗಲೇ ಮರಣ ಹೊಂದಿರುವ ಅಪ್ರಾಪ್ತ ವಯಸ್ಸಿನ ಶಾಲಾ ವಿದ್ಯಾರ್ಥಿಗಳು, ಅಂಗವಿಕಲರು, ವಯೋವೃದ್ಧರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗು ಇತರೆ ವ್ಯಕಿಗಳಿಗೆ ಸೇರಿದಂತೆ ಕೂಲಿ ಪಾವತಿ

ಮಾಡಿರುವ ದೂರಿಗೆ ಸಂಬಂಧಿಸಿದಂತೆ ಯಾವುದೇ ಲಿಖಿತ ಹೇಳಿಕೆ ನೀಡಿರುವುದಿಲ್ಲ. ಆದ ಕಾರಣ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಚಿತ್ರದುರ್ಗ ಜಿಲ್ಲಾ ಪಂಚಾಯತ್‌ರವರ ವರದಿಯಂತೆ ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ಡಿ.ಬಿ.ತಿಪ್ಪೇಸ್ವಾಮಿ ಬಿನ್ ಬಸವಂತಪ್ಪರವರು ಸರ್ಕಾರಿ ಅನುದಾನ ದುರ್ಬಳಕೆ, ಕರ್ತವ್ಯ ಲೋಪ ಮಾಡಿರುವುದು ದೃಢಪಟ್ಟಿರುತ್ತದೆ. ಆದ ಕಾರಣ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4), 48(5)ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆ. ಆದ ಕಾರಣ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4), 48(5)ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಡಿ.ಬಿ.ತಿಪ್ಪೇಸ್ವಾಮಿ, ಸದಸ್ಯರು, ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1096 ಗ್ರಾಪಂಅ 2019 ಬೆಂಗಳೂರು, ದಿನಾಂಕ:24.01.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಡಿ.ಬಿ.ತಿಪ್ಪೇಸ್ವಾಮಿ, ಸದಸ್ಯರು, ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರು ಚುನಾವಣೆಗೆ ಸ್ಪರ್ಧಿಸುವ ಸಂದರ್ಭದಲ್ಲಿ ಗುತ್ತಿಗೆದಾರರಾಗಿರುವ ಮಾಹಿತಿಯನ್ನು ಗೋಪ್ಯಗೊಳಿಸಿ ಸ್ಪರ್ಧಿಸಿರುವುದು ಕಾನೂನುಬಾಹಿರವಾಗಿರುತ್ತದೆ ಮತ್ತು 2016-17ನೇ ಸಾಲಿನ ಕೂಲಿಕಾರರ ಪಟ್ಟಿಯಲ್ಲಿ ಈಗಾಗಲೇ ಮರಣ ಹೊಂದಿರುವ ಅಪ್ರಾಪ್ತ ವಯಸ್ಸಿನ ಶಾಲಾ ವಿದ್ಯಾರ್ಥಿಗಳು, ಅಂಗವಿಕಲರು, ವಯೋವೃದ್ಧರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ಇತರೆ ವ್ಯಕಿಗಳಿಗೆ ಸೇರಿದಂತೆ ಕೂಲಿ ಪಾವತಿ ಮಾಡಿರುವ ದೂರಿಗೆ ಸಂಬಂಧಿಸಿದಂತೆ ಯಾವುದೇ ಲಿಖಿತ ಹೇಳಿಕೆ ನೀಡದೇ ಇರುವುದು ಹಾಗೂ ಸರ್ಕಾರಿ ಅನುದಾನ ದುರ್ಬಳಕೆ, ಕರ್ತವ್ಯ ಲೋಪ ಮಾಡಿರುವುದು ದೃಢಪಟ್ಟಿರುವುದರಿಂದ ಶ್ರೀ ಡಿ.ಬಿ.ತಿಪ್ಪೇಸ್ವಾಮಿ, ಸದಸ್ಯರು, ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ರನ್ವಯ ಎನ್.ಜಿ.ಹಳ್ಳಿ ಗ್ರಾಮ ಪಂಚಾಯತಿಯ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಮುಂದುವರೆಸುತ್ತಾ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 157(2) ಮತ್ತು 246 (8) ರಡಿ ದುರುಪಯೋಗಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಿಸಿದವರಿಂದ ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಹೊಳಲ್ಕೆರೆ ಇವರಿಗೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/01/2020.
*(ನವೀನ್ ಕುಮಾರ್. ಬಿ)*
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)(ಕ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**<u>ಇವರಿಗೆ:</u>**

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹಚ್. ರಸ್ತೆ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.

3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊಳಲ್ಕೆರೆ, ಚಿತ್ರದುರ್ಗ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎನ್.ಜಿ ಹಳ್ಳಿ ಗ್ರಾಮ ಪಂಚಾಯತಿ, ಹೊಳ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
6) ಶ್ರೀ ಡಿ. ತಿಪ್ಪೇಸ್ವಾಮಿ, ಸದಸ್ಯರು, ಗ್ರಾಮ ಪಂಚಾಯತಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. (**ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊಳಲ್ಕೆರೆ, ಚಿತ್ರದುರ್ಗ ಜಿಲ್ಲೆ ಇವರ ಮುಖಾಂತರ**)

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.